**ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ/269/ಯುಬಿವಿ/2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 08.09.2023

**ಇಂದ**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ**
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ ಆವರಣ, ಬೆಂಗಳೂರು.

**ಮಾನ್ಯರೆ,**

**ವಿಷಯ**: ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ **ಜ್ಯೋತಿ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್** ಕಾಲೇಜಿಗೆ 2023-2024 ನೇ ಶೈಕ್ಷಣಿಕ ಸಾಲಿನಿಂದ ಹೊಸ ಕೋರ್ಸುಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ**:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ:12.02.2021, ದಿನಾಂಕ: 16.02.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/384/ಯುಎನ್‌ಇ/2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಎಸಿಎ-3:ಎ3: ಹೊಕೋಪ್ರ:14: 2023-2024, ದಿನಾಂಕ: 15.07.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. **ಜ್ಯೋತಿ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್, ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು- 560 082** ಇಲ್ಲಿ 2023-2024ನೇ ಸಾಲಿನಿಂದ *ಹೊಸದಾಗಿ* ***ಬಿ.ಸಿ.ಎ.-60 ಕೋರ್ಸನ್ನು*** ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ (11) ರಡಿ ಅನುಮತಿ ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣಿ ಸಮಿತಿಯ ವರದಿ ಹಾಗೂ ಸಿಂಡಿಕೇಟ್ / ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ (3) ರ ತಮ್ಮ ಪತ್ರದ ಮೂಲಕ, UUCMS ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ: 18.02.2022ರನ್ವಯ ಅಗತ್ಯ ಪ್ರಮಾಣದ ಜಮೀನಿನ ದಾಖಲಾತಿಗಳನ್ನು ದೃಢಪಡಿಸಿಕೊಂಡು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಆದುದರಿಂದ, **ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್, ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು - 560 082** ಇಲ್ಲಿ 2023-24ನೇ ಸಾಲಿನಿಂದ ಹೊಸ ಕೋರ್ಸುಗಳನ್ನು ಆರಂಭಿಸಲು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|
| ***ಬಿ.ಸಿ.ಎ.*** | ವಿ.ವಿ. ಪರಿನಿಯಮಾವಳಿಗಳು | ***60*** |

ಬೆಂಗಳೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಶೈಕ್ಷಣಿಕ ಪರಿಷತ್ ಮತ್ತು ಸಿಂಡಿಕೇಟ್‌ನ ನಿರ್ಣಯಗಳನ್ನು ಅನುಸರಿಸಿ ಉಲ್ಲೇಖಿತ ಪತ್ರದನ್ವಯ ಸಲ್ಲಿಸಲಾದ ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರ ಪ್ರಕರಣ 65ರ ಉಪಬಂಧಗಳನುಸಾರ ಸಮಗ್ರವಾಗಿ ಸಂವೀಕ್ಷಿಸಿ, ಪರಿಗಣಿಸಲಾಗಿದೆ.

***ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್, ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು - 560 082*** ಇಲ್ಲಿ 2023-2024ನೇ ಸಾಲಿನಿಂದ ಹೊಸದಾಗಿ **ಬಿ.ಸಿ.ಎ.** ಕೋರ್ಸನ್ನು **60** ವಿದ್ಯಾರ್ಥಿ ಪ್ರಮಾಣದೊಂದಿಗೆ ಆರಂಭಿಸಲು ಸಂಯೋಜನೆಗೆ ನೀಡಲಾಗಿರುವ ಸರ್ಕಾರದ ಪೂರ್ವೋಕ್ತ ಷರತ್ತುಗಳು ಹಾಗೂ ಸ್ಥಳೀಯ ವಿಚಾರಣೆ ಸಮಿತಿಯ ಹಾಗೂ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟಿರುತ್ತದೆ:-

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ
5. ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

6. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

7. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

8. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು;

ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

9. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13 ಶೈಕ್ಷಣಿ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣ ಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ನಿಗದಿ ಪಡಿಸಲಾದ ಸೂಚ್ಯಾಂಕಗಳ ಪೈಕಿ ಪಾಲನೆಯಾಗದ ಸೂಚ್ಯಾಂಕಗಳನ್ನು 6 ತಿಂಗಳ ಒಳಗಾಗಿ ಪೂರೈಸತಕ್ಕದ್ದು.

14 ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ರಲ್ಲಿನ ಮಾನದಂಡಗಳು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ: 12.02.2021, ಇಡಿ 218 ಯುಎನ್ಇ 2020, ದಿನಾಂಕ: 24.08.2022 ರಲ್ಲಿನ ಷರತ್ತುಗಳನ್ನು ಆರು ತಿಂಗಳ ಒಳಗಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

**ತಮ್ಮ ನಂಬುಗೆಯ,**

**(ನಂದಕುಮಾರ್ ಬಿ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2).

**ಪ್ರತಿ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರಾಂಶುಪಾಲರು, ***ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್, ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು - 560 082.***
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)